# ಓಟ ಓಟ ಹಿಂದೋಟ

ಬದುಕು ಮುಂದಕ್ಕೆ ಹೋಗುತ್ತಿರುವಂತೆ ಕಂಡರೂ ನಮ್ಮ ಮನಸ್ಸು ಗತಕ್ಕೆ ಆತುಕೊಂಡಿರುತ್ತದೆ. ಹಿಂದೋಟದ ಅವಲೋಕನ ಇಲ್ಲದೆ ಹೋದಾಗ ಮುನ್ನೋಟ ಅಸ್ಪಷ್ಟ ಅಥವಾ ಅಪೂರ್ಣ ಆಗಬಹುದೇನೊ?

■ ಪ್ರಭಾಮಣಿ ನಾಗರಾಜ

ಓಟ ಎಂದರೆ ಮುಮ್ಮುಖ ವೇಗದ ಚಲನೆ ಎನ್ನುವುದು ಸರ್ವವೇದ್ಯ. ಆದರೆ ಇದೇನಿದು ಹಿಂದೋಟ? ಹಿಂದಕ್ಕೆ ಓಡಲು ಸಾಧ್ಯವೇ? ಎಂದು ಅಚ್ಚರಿಪಡಲೂಬಹುದು. ನಮ್ಮ ದೇಹಕ್ಕೆ ಮುಂದಕ್ಕೆ ಮಾತ್ರ ಓಡಲು ಸಾಧ್ಯ ನಿಜ. (ಗಿನ್ನೆಸ್ ದಾಖಲೆ ಮಾಡಲು ಯಾರಾದರೂ ಹಿಮ್ಮುಖವಾಗಿ ಓಡಿರಲೂಬಹುದು!) ಆದರೆ ಮನಸ್ಸು? ಅದು ಮುಂದೆ ಹಿಂದೆ ಮೇಲೆ ಕೆಳಗೆ... ದಶದಿಕ್ಕುಗಳ ಯಾವ ನೇರದಲ್ಲಾದರೂ ಓಡೀತು!

ಸದ್ಯದಲ್ಲಿ ಸದಾ ಹಿಂದಕ್ಕೇ ಓಡಲಿಚ್ಛಿಸುವ ಈ ಮನದ ಬಗ್ಗೆ ನೋಡೋಣ ಎಂದೇನೂ ನಾನು ಹೇಳಲು ಹೊರಟಿಲ್ಲ. ಈಗೀಗ ವರ್ತಮಾನದ ಕಾರ್ಪಣ್ಯಗಳೇ ನಮ್ಮನ್ನು ಕಟ್ಟಿ ಹಾಕುತ್ತಿರುವಾಗ ಹಿಂದಿನದನ್ನೆಲ್ಲಾ ನೆನೆಸಿಕೊಂಡು ಮೆಲುಕು ಹಾಕುವ ವ್ಯವಧಾನವಾದರೂ ಎಲ್ಲಿದೆ? ಆ ಜವಾಬ್ದಾರಿಯನ್ನು ನಮ್ಮೆಲ್ಲರ ಪರಮ ಪ್ರಿಯಮಿತ್ರನಾದ ಫೇಸ್‌ಬುಕ್ ವಹಿಸಿಕೊಂಡುಬಿಟ್ಟಿದೆ!

ಪ್ರತಿದಿನ ರಾತ್ರಿ 12 ಗಂಟೆಗೆ ನಾನು ಮಾಡುವ ಮೊದಲ ಕೆಲಸವೆಂದರೆ ಫೇಸ್‌ಬುಕ್‌ನಲ್ಲಿ ಮೆಮೊರೀಸ್ ಸರ್ಚ್ ಮಾಡುವುದು. ಗತಿಸಿದ ಕಾಲದಲ್ಲಿ ಹಿಂಪಯಣ ಮಾಡಿ ಹಿಂದಿನ ವರ್ಷಗಳಲ್ಲಿ ಇದೇ ದಿನದಲ್ಲಿ ನಾವು ಮಾಡಿದ್ದ ಅಮೋಘ ಸಾಧನೆಯನ್ನು ಎತ್ತಿ (ಮತ್ತೆ) ತೋರಿಸಿ ಭೇಷ್ ಎನಿಸಿಕೊಳ್ಳುವುದರಲ್ಲಿ ಫೇಸ್‌ಬುಕ್‌ಗೆ ಎಲ್ಲಿಲ್ಲದ ಖುಷಿ! ಅದನ್ನು ಮತ್ತೆ ಮತ್ತೆ ಹಂಚಿಕೊಂಡು ಬರುವ ಲೈಕ್, ಕಾಮೆಂಟ್‌ಗಳನ್ನು ಎಣಿಸುವುದರಲ್ಲಿ ನಮಗೆ ಖುಷಿ!

ನನ್ನ ಫೇಸ್‌ಬುಕ್ ಅಂತೂ '1–2... 10 ವರ್ಷಗಳ ಹಿಂದೆ...' ಮುಂತಾದ ನೆನಪುಗಳ ಮೆರವಣಿಗೆಗಳಿಂದಲೇ ತುಂಬಿಹೋಗಿದೆ. ಇದೇನಿದು ಇವರ ಬದುಕು ಮುನ್ನಡೆಯುತ್ತಲೇ ಇಲ್ಲವೇ? ಯಾವಾಗ ಇವರು ದನ–ಎಮ್ಮೆಗಳಂಥ ಮೆಲುಕು ಹಾಕುವ ಪ್ರಾಣಿಗಳ ಗುಂಪಿಗೆ ಸೇರಿದರು? ಎಂದು ಆತ್ಮೀಯರು ಅಲವತ್ತುಕೊಳ್ಳಬಹುದು. ಆದರೂ ಗತ ಮೆಲುಕಿನಲ್ಲಿರುವ ಸುಖ ಗಬಗಬನೆ ತಿಂದು ಮುಗಿಸುವ ವಾಸ್ತವದಲ್ಲಿ ಹೇಗೆ ತಾನೇ ಇರಲು ಸಾಧ್ಯ?

ನಾವು ಚಿಕ್ಕವರಿದ್ದಾಗ ಸೈಕಲ್ ಚಕ್ರದ ಹೊರ ಫ್ರೇಮನ್ನು ಓಡಿಸುತ್ತಾ ಅದರ ಹಿಂದೆ ಓಡುವುದೇ ಒಂದು ಆಟವಾಗಿತ್ತು. ಊರ ಮಕ್ಕಳೆಲ್ಲಾ ಸಮಯದ ಪರಿವೆಯಿಲ್ಲದೇ ಯಾವಾಗೆಂದರೆ ಆಗ, ರಜೆ ಇದ್ದರಂತೂ ಮಧ್ಯಾಹ್ನದ ರಣರಣ ಬಿಸಿಲಿನಲ್ಲಿಯೂ ಚಕ್ರ ಓಡಿಸುತ್ತಿದ್ದರು. ನನ್ನ ಜೊತೆ ಮಕ್ಕಳಲ್ಲಿ ಒಬ್ಬನಾದ ಭೀಮನೂ ಚಕ್ರ ಓಡಿಸುತ್ತಾ ನಮ್ಮ ಮನೆ ಹತ್ರ ಬಂದಾಗ ಸದಾ ಜಗಲಿ ಮೇಲೆ ಕೂತಿರ್ತಿದ್ದ ಅಜ್ಜಿ, 'ಹೇಗೆ ಓಡ್ತಿದೀಯೋ ಭೀಮಾ?' ಎಂದು ಲೋಕಾಭಿರಾಮವಾಗಿ ಕೇಳಿದರೆ, 'ನಿಮ್ಮೊಮ್ಮಗಳು ಮುಂದುಮುಂದಕ್ಕೆ ಹೋಗ್ತಿದಾರೆ ಅಜ್ಜಿ, ನಾನು ಹಿಂದುಹಿಂದಕ್ಕೆ ಹೋಗ್ತಿದೀನಿ' ಅಂತಿದ್ದ! ಒಂದೇ ಕ್ಲಾಸಲ್ಲಿ ಫೇಲಾಗಿ ಕೂರೋದು ಅಂದ್ರೆ ಅವನ ಅರ್ಥದಲ್ಲಿ ಹಿಂದಕ್ಕೆ ಹೋಗೋದು ಅಂತ! ಹಾಗೆ ಹೇಳ್ತಿದ್ದೋನು ತನ್ನ ಅತ್ಯಂತ ಪ್ರಿಯ ಸಂಸಾರವನ್ನು ನಡುನೀರಿನಲ್ಲೇ ಕೈಬಿಟ್ಟು ಎಲ್ಲರಿಗಿಂತಲೂ ಮುಂದೆಯೇ ಹೋಗಿಬಿಟ್ಟ!

ಹಿಂದೋಟ ಎನ್ನುವುದು ಒಂದು ರೀತಿ ಹಿಂಬಡ್ತಿ ಎನ್ನುವಂತೆಯೇ ಸೌಂಡ್

